## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಡಿಸಿಎ11 ಎಆರ್‌ಬಿ 2010, ಬೆಂಗಳೂರು, ದಿನಾಂಕ:23.06.2011.**

ಭಾರತದ ಸಂವಿಧಾನದ 166ನೇ ಅನುಚ್ಛೇದದ (2) ಮತ್ತು (3) ನೇ ಖಂಡಗಳ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ರಾಜ್ಯಪಾಲರು, ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಮುಂದಿನ ನಿಯಮಗಳನ್ನು ಈ ಮೂಲಕ ರಚಿಸಲಾಗಿದೆ, ಎಂದರೆ:-

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು, ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) (ತಿದ್ದುಪಡಿ) ನಿಯಮಗಳು, 2011 ಎಂದು ಕರೆಯತಕ್ಕದ್ದು.

(2) ಅವು, ಅಧಿಕೃತ ರಾಜ್ಯಪತ್ರದಲ್ಲಿ ಅವುಗಳ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. 60ನೇ ನಿಯಮದ ತಿದ್ದುಪಡಿ:-** ಕರ್ನಾಟಕ ಸರ್ಕಾರ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977ರ 60ನೇ ನಿಯಮದಲ್ಲಿ (1)ನೇ ಉಪ-ನಿಯಮಕ್ಕೆ ಈ ಮುಂದಿನದನ್ನು ಪ್ರತ್ಯಾಯೋಜಿಸತಕ್ಕದ್ದು, ಎಂದರೆ:-

" (1) ವಿಧೇಯಕವನ್ನು ವಿಧಾನ ಮಂಡಲದ ಉಭಯ ಸದನಗಳು ಅಂಗೀಕರಿಸಿದಾಗ, ಅದನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯು ಪರಿಶೀಲಿಸತಕ್ಕದ್ದು ಮತ್ತು ರಾಜ್ಯಪಾಲರು ವಿಧೇಯಕಕ್ಕೆ ಅವರು ಸಮ್ಮತಿಯನ್ನು ಏಕೆ ಘೋಷಿಸಬಹುದು ಅಥವಾ ರಾಜ್ಯಪಾಲರು ವಿಧೇಯಕವನ್ನು ಭಾರತದ ರಾಷ್ಟ್ರಪತಿಯವರ ಪರಿಗಣನೆಗಾಗಿ ಏಕೆ ಕಾಯ್ದಿರಿಸಿರತಕ್ಕದ್ದು ಎಂಬುದರ ಬಗ್ಗೆ ಕಾರಣಗಳಿದ್ದರೆ, ಅದನ್ನು ಕಾರ್ಯದರ್ಶಿಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಇವರು ವರದಿಯೊಂದಿಗೆ ರಾಜ್ಯಪಾಲರಿಗೆ ಕಳುಹಿಸತಕ್ಕದ್ದು**,"**

ಕರ್ನಾಟಕ ರಾಜ್ಯಪಾಲರು
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

ಪಿ. ಮಾರ್ಕಂಡೇಯ
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)